4. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ವಿದ್ಯುಚ್ಛಕ್ತಿ (ಕರ್ನಾಟಕ ತಿದ್ದುಪಡಿ) ವಿಧೇಯಕ, 2005

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು): ಮಾನ್ಯ ಅಧ್ಯಕ್ಷರೇ, 2005ನೇ ಸಾಲಿನ ವಿದ್ಯುಚ್ಛಕ್ತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾಪ ಏನೆಂದರೆ, "2005ನೇ ಸಾಲಿನ ವಿದ್ಯುಚ್ಛಕ್ತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕಾರವಾಯಿತು

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು): ಮಾನ್ಯ ಅಧ್ಯಕ್ಷರೇ, "2005ನೇ ಸಾಲಿನ ವಿದ್ಯುಚ್ಛಕ್ತಿ (ಕರ್ನಾಟಕ ತಿದ್ದುಪಡಿ ವಿಧೇಯಕವನ್ನು ಮಂಡಿಸುತ್ತೇನೆ." (ಅನುಬಂಧ–1)

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

5. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ)

1956ರ ಕಂಪನಿ ಕಾಯಿದೆ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ರಾಜ್ಯ ಪೊಲೀಸ್ ಗೃಹ ನಿರ್ಮಾಣ ನಿಗಮ ನಿಯಮಿತದ 2003–04ನೇ ಸಾಲಿನ ವಾರ್ಷಿಕ ಮತ್ತು ಲೆಕ್ಕಪರಿಶೋಧನಾ ವರದಿ.

ಭಾರತ ಸಂವಿಧಾನದ ಅನುಚ್ಛೇದ 323ರ ಪರಿಚ್ಛೇದ (2)ರ ಅನ್ವಯದ ಮೇರೆಗೆ :

1. ಕರ್ನಾಟಕ ಲೋಕಸೇವಾ ಆಯೋಗದ 2001–02ನೇ ಸಾಲಿನ ವಾರ್ಷಿಕ ವರದಿ.

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ:

1. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ 2002–03ನೇ ಸಾಲಿನ ಆಡಳಿತ ವರದಿ.
2. ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ 2003–04ನೇ ಸಾಲಿನ ವಾರ್ಷಿಕ ವರದಿ.
3. ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ 2003–04ನೇ ಸಾಲಿನ ವಾರ್ಷಿಕ ವರದಿ.
4. ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರದ 2002–03ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಹಾಗೂ ವಾರ್ಷಿಕ ವರದಿ ಮತ್ತು 2003–04ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
5. ಉಡುಪಿ ನಗರಾಭಿವೃದ್ಧಿ ಪ್ರಾಧಿಕಾರದ 2003–04ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಮತ್ತು ವಾರ್ಷಿಕ ವರದಿ ಹಾಗೂ 2002–03ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
6. ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ 2003–04ನೇ ಸಾಲಿನ ವಾರ್ಷಿಕ ವರದಿ ಹಾಗೂ 2002–03ನೇ ಸಾಲಿನ ಲೆಕ್ಕಪರಿಶೋಧನಾ ವರದಿ.